ಇಲಾಖೆ / ವಿಷಯ : DEPARTMENT / SUBJECT: ಸಂಸತ್

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ ದಿನಾಂಕ : DATE : 13/9/20

# ಸದನ ಕೋಲಾಹಲ ಎದುರಿಸಲು ಸಜ್ಜು

## ನಾಳೆಯಿಂದ ಸಂಸತ್ ಅಧಿವೇಶನ

ನವದೆಹಲಿ: ಈ ಬಾರಿಯ ಸಂಸತ್‌ನ ಮುಂಗಾರು ಅಧಿವೇಶನ ಸೋಮವಾರದಿಂದ ಆರಂಭವಾಗಲಿದೆ. ಲೋಕಸಭೆ, ರಾಜ್ಯಸಭೆಯ ಕಲಾಪಗಳನ್ನು ಸುಗಮವಾಗಿ, ಶಾಂತಿಯುತವಾಗಿ ನಡೆಸಿಕೊಂಡು ಹೋಗಲು ಸರ್ಕಾರ ಸನ್ನದ್ಧವಾಗಿದ್ದರೂ, ವಿಪಕ್ಷಗಳು ಕೆಲವು ಸೂಕ್ಷ್ಮ ವಿಚಾರಗಳ ಚರ್ಚೆಗಳಲ್ಲಿ ಸರ್ಕಾರವನ್ನು ಇಕ್ಕಟ್ಟಿಗೆ ಸಿಲುಕಿಸಲು ನಿರ್ಧರಿಸಿವೆ. ಆದರೆ, ಅದಕ್ಕೆ ದಿಟ್ಟ ಉತ್ತರ ನೀಡಲು ಕೇಂದ್ರವೂ ಸಜ್ಜಾಗಿದೆ.

ವಿಪಕ್ಷಗಳು ಕೊರೊನಾ ವಿಚಾರದಲ್ಲಿ ಸರ್ಕಾರ ಕೈಗೊಂಡ ನಿರ್ಧಾರಗಳು, ಜಿಡಿಪಿ ಪತನ ಹಾಗೂ ಗಡಿಯಲ್ಲಿ ಚೀನಾದಿಂದ ಎದುರಿಸುತ್ತಿರುವ ಬಿಕ್ಕಟ್ಟು ಪರಿಸ್ಥಿತಿಗೆ ಸಂಬಂಧಿಸಿದಂತೆ ಪ್ರಶ್ನೆಗಳ ಸುರಿಮಳೆ ಸುರಿಸಲು ಕಾಯುತ್ತಿದ್ದರೆ, ಕೇಂದ್ರ ಸರ್ಕಾರ ತಾನು ಇತ್ತೀಚೆಗೆ ಕೈಗೊಂಡಿರುವ 11 ಸುಗ್ರೀವಾಜ್ಞೆಗಳನ್ನು ಎರಡೂ ಸದನಗಳಲ್ಲಿ (ಲೋಕಸಭೆ ಮತ್ತು ರಾಜ್ಯಸಭೆ) ಮಂಡಿಸಿ ಸದನದ ಒಪ್ಪಿಗೆ ಪಡೆಯುವುದಕ್ಕೆ ಪ್ರಥಮ ಆದ್ಯತೆ ನೀಡಿದೆ.

### 'ಬಹಿರಂಗ ಚರ್ಚೆ ಬೇಡ'

ಈ ಕುರಿತಂತೆ ಮಾತನಾಡಿರುವ ಸಚಿವರೊಬ್ಬರು, "ನಮ್ಮ ಸರ್ಕಾರ, ಚರ್ಚೆಗಳಿಂದ ಓಡಿಹೋಗುವುದಿಲ್ಲ. ಆದರೆ, ಭಾರತ-ಚೀನಾ ಗಡಿ ವಿಚಾರ ಅತ್ಯಂತ ಸೂಕ್ಷ್ಮವಾದದ್ದು. ಹಾಗಾಗಿ, ಆ ವಿಚಾರದಲ್ಲಿ ಸರ್ಕಾರ ಯಾವ ಕ್ರಮಗಳನ್ನು ಅನುಸರಿಸಲಿದೆ, ಯಾವ ತಂತ್ರ ಗಾರಿಕೆಯನ್ನು ರೂಪಿಸಲಿದೆ ಎಂಬುದನ್ನು ಬಹಿರಂಗವಾಗಿ ಚರ್ಚಿಸುವುದು ಸಲ್ಲದು. ಆದರೆ, ಇನ್ನೊಂದು ವಾರ ಅಥವಾ ಕೆಲವೇ ದಿನಗಳಲ್ಲಿ ಗಡಿ ಸಮಸ್ಯೆಯನ್ನು ಇತ್ಯರ್ಥಗೊಳಿಸಲು ನಿರ್ಧರಿಸಲಾಗಿದೆ" ಎಂದು ಹೇಳಿದ್ದಾರೆ.

### ವಿಪಕ್ಷಗಳನ್ನು ಎದುರಿಸಲು ಸನ್ನದ್ಧ

ಅಧಿವೇಶನ ಶುರುವಾಗುತ್ತಿದ್ದಂತೆ ಚೀನಾ ಬಿಕ್ಕಟ್ಟಿನ ಬಗ್ಗೆ ಸರ್ಕಾರವನ್ನು ಪೇಚಿಗೆ ಸಿಕ್ಕಿಸಲು ವಿಪಕ್ಷಗಳು ರೂಪಿಸಿರುವ ತಂತ್ರಗಾರಿಕೆಯನ್ನು ಸಮರ್ಥವಾಗಿ ಎದುರಿಸಲು ಬಿಜೆಪಿ ಸನ್ನದ್ಧವಾಗಿದೆ. ಈ ಕುರಿತಂತೆ ಪ್ರತಿಕ್ರಿಯಿಸಿರುವ ಪಕ್ಷದ ಆಂತರಿಕ ಮೂಲಗಳು, "ಚರ್ಚೆಗೆ ನಾವು ಸಿದ್ಧವಾಗಿದ್ದೇವೆ. ಸದನದಲ್ಲಿ ಯಾವಾಗ ಆ ಚರ್ಚೆ ನಡೆದರೂ ನಾವು ಸಮರ್ಥವಾಗಿ ಉತ್ತರ ನೀಡುತ್ತೇವೆ. ಗಡಿಯಲ್ಲಿ ನಾವು ಹೇಗೆ ಚೀನಾಕ್ಕೆ ದಿಟ್ಟತನದ ಉತ್ತರ ನೀಡಿದ್ದೇವೆಯೋ, ಅದೇ ರೀತಿ ಸದನದ ಚರ್ಚೆಗಳನ್ನೂ ದಿಟ್ಟತನದಿಂದ ಎದುರಿಸಲಿದ್ದೇವೆ" ಎಂದು ಹೇಳಿವೆ.

### ಸಭೆಯಲ್ಲಿ ವಿವರಣೆ?

ಸರ್ಕಾರದ ಕೆಲವು ನಂಬಲರ್ಹ ಮೂಲಗಳನ್ನು ಉದ್ದೇಶಿಸಿ ಮಾಡಿರುವ ಆ ವರದಿಯಲ್ಲಿ, 'ಸಾಮಾನ್ಯವಾಗಿ ಪ್ರತಿಯೊಂದು ಅಧಿವೇಶನ ಶುರುವಾಗುವ ಮುನ್ನ ಕೇಂದ್ರ ಸರ್ಕಾರ ಸರ್ವಪಕ್ಷಗಳ ಸಭೆ ಕರೆಯುತ್ತದೆ. ಆದರೆ, ಈ ಬಾರಿ ಕೊರೊನಾ ಮಾರ್ಗಸೂಚಿ ಹಿನ್ನೆಲೆಯಲ್ಲಿ ಸರ್ವಪಕ್ಷಗಳ ಸಭೆಯನ್ನು ರದ್ದುಗೊಳಿಸಿ, ಅದರ ಬದಲಿಗೆ ವ್ಯವಹಾರ ಸಲಹಾ ಸಮಿತಿಯ (ಬಿಎಸಿ) ಸಭೆ ನಡೆಸಲು ಉದ್ದೇಶಿಸಲಾಗಿದೆ. ಆ ಸಭೆಯಲ್ಲಿ ವಿಪಕ್ಷಗಳ ಪ್ರತಿನಿಧಿಗಳು ಮಾತ್ರವೇ ಭಾಗವಹಿಸುವ ನಿರೀಕ್ಷೆಯಿದ್ದು, ಆ ಸಭೆಯಲ್ಲೇ ಭಾರತ-ಚೀನಾ ಗಡಿ ಪರಿಸ್ಥಿತಿಯ ಬಗ್ಗೆ ಸಂಕ್ಷಿಪ್ತವಾಗಿ ವಿವರಿಸಲಾಗುತ್ತದೆ. ಅಷ್ಟಾದರೂ, ವಿಪಕ್ಷಗಳ ಪ್ರತಿನಿಧಿಗಳು ದೀರ್ಘ ಸ್ವರೂಪದ ಉತ್ತರ ಬೇಕು ಎಂದಾದರೆ ರಕ್ಷಣಾ ಸಚಿವರಿಂದ ವಿಸ್ತೃತ ಮಾಹಿತಿ ನೀಡಲಾಗುತ್ತದೆ' ಎಂದು ಹೇಳಲಾಗಿದೆ.